# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 741

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಸಿ ಎನ್ ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 22.07.2024

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿರುವ ಒಟ್ಟು ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡುದಾರರ ಸಂಖ್ಯೆ ಎಷ್ಟು;</td><td>ರಾಜ್ಯದಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಎ.ಎ.ವೈ ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಕಾರ್ಡ್‌ಗಳ ಸಂಖ್ಯೆ ಈ ಕೆಳಕಂಡಂತಿವೆ:-
<table>
<tr><th>ಅಂತ್ಯೋದಯ ಅನ್ನ ಯೋಜನೆ</th><th>ಆದ್ಯತಾ ಪಡಿತರ ಚೀಟಿ</th><th>ಆದ್ಯತೇತರ ಪಡಿತರ ಚೀಟಿ</th><th>ಒಟ್ಟು</th></tr>
<tr><td>10,84,009</td><td>1,16,52,660</td><td>25,00,790</td><td>1,52,37,459</td></tr>
</table></td></tr>
<tr><td>ಆ</td><td>ಬಿ.ಪಿ.ಎಲ್ ಕಾರ್ಡ್ ನೀಡಲು ಅನುಸರಿಸುತ್ತಿರುವ ಮಾನದಂಡಗಳೇನು;</td><td>ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಈ ಕೆಳಕಂಡ (ಅನರ್ಹತೆಯನ್ನಾಧರಿಸಿ ಹೊರಗಿಡುವ) ಮಾನದಂಡಗಳನ್ನು ಜಾರಿಯಲ್ಲಿರುತ್ತವೆ.<br><br>1. ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಮಂಡಳಿಗಳು/ನಿಗಮಗಳು/ಸ್ವಾಯತ್ತ ಸ್ಥೆಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ವ್ಯಾಟ್/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>2. ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.</td></tr>
</table>

| | | |
|---|---|---|
| | | 3. ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>4. ಕುಟುಂಬದ ವಾರ್ಷಿಕ ಆದಾಯವು ರೂ.1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು. |
| ಇ | ಇತ್ತೀಚಿನ ದಿನಗಳಲ್ಲಿ ಒಬ್ಬ ಕೂಲಿಗಾರನೂ ಸಹ ನಿಗದಿತ ಸಮಯಕ್ಕೆ ಕೂಲಿಗೆ ಹೋಗಲು ದ್ವಿಚಕ್ರ ವಾಹನ ಹಾಗೂ ಕನಿಷ್ಟ ಮನರಂಜನೆಗೆ ಟಿ.ವಿ ಇತ್ಯಾದಿಗಳು ಅತ್ಯಾವಶ್ಯಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುವುದಿಲ್ಲ. |
| ಈ | ಬಂದಿದ್ದಲ್ಲಿ, ಈ ಸೌಲಭ್ಯ ಹೊಂದಿರುವ ಫಲಾನುಭವಿಗಳ ಹೆಸರುಗಳನ್ನು ಅನರ್ಹತೆಯಿಂದ ತೆಗೆಯಲು ಸರ್ಕಾರ ಕೈಗೊಳ್ಳುವ ಕ್ರಮಗಳಾವುವು? | ಉದ್ಭವಿಸುವುದಿಲ್ಲ |

ಆನಾಸ 221 ಡಿಆರ್ಎ 2024 (ಇ-ಆಫೀಸ್)

(ಕೆ.ಹೆಚ್. ಮುನಿಯಪ್ಪ)

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು